# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಎನ್.ಪಾಟೀಲ್,(ನಿವೃತ್ತಿ)ಹಿಂದಿನ ಸ.ಕಾ.ಇಂ.,ಪಂ.ರಾ.ಇಂ.ಉಪವಿಭಾಗ ಗಂಗಾವತಿ, ಶ್ರೀ ದುರ್ಗಣ್ಣ, ಅಂದಿನ ಸಹಾಯಕ ಇಂಜಿನಿಯರ್ ಮತ್ತು ಶ್ರೀ ಡಿ.ಎಂ.ರವಿಕುಮಾರ್. ಅಂದಿನ ಕಿರಿಯ ಇಂಜಿನಿಯರ್,ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪವಿಭಾಗ,ಗಂಗಾವತಿ.ಇವರುಗಳ ವಿರುದ್ಧ ಲೋಕಾಯುಕ್ತ ಇಲಾಖಾ ವಿಚಾರಣೆ – ಅಂತಿಮ ಆದೇಶ.

**ಓದಲಾಗಿದೆ:-** 1. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 68 ಜಿಪಅ 2014 ದಿನಾಂಕ: 17.09.2014
2.ಅಪರ ನಿಬಂಧಕರು ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ ಕಚೇರಿ, ಬೆಂಗಳೂರು ಇವರ ಇಲಾಖಾ ವಿಚಾರಣೆ ವರದಿ ಸಂಖ್ಯೆ: LOK/INK/14-A/513/2014 ARE-7 ದಿನಾಂಕ: 25.11.2021.
3.ಮಾನ್ಯ ಉಪ ಲೋಕಾಯುಕ್ತ ರವರ ಶಿಫಾರಸ್ಸು ವರದಿ ಸಂಖ್ಯೆ: LOK/INK/14-A/ 513/2014 ARE-7 ದಿನಾಂಕ: 29.11.2021

*****

**ಪ್ರಸ್ತಾವನೆ:-**

ಶ್ರೀ ರುದ್ರಪ್ಪ ಜೆ. ಬಿನ್ ವೀರಭದ್ರಪ್ಪ,ಜೆ. ಹುಳ್ಳಿಹಾಳ ರವರು ಅವರ ಸ್ವಂತ: ಭೂಮಿ ಸರ್ವೇ ನಂ.1 ರ ವಿಸ್ತೀರ್ಣ 3.01 ಗುಂಟೆ ಜಮೀನಿನಲ್ಲಿ ಸುವರ್ಣಗ್ರಾಮ ಯೋಜನೆಯಡಿ ಅಕ್ರಮವಾಗಿ ಸಮುದಾಯ ಭವನ ಮತ್ತು ಅಂಗನವಾಡಿ ಕೇಂದ್ರ ಕಟ್ಟಡ ನಿರ್ಮಾಣ ಕಾಮಗಾರಿ ಮಾಡುತ್ತಿದ್ದು, ಸುಮಾರು 50 ಲಕ್ಷ ಅವ್ಯವಹಾರ ನಡೆದಿದೆಯೆಂದು ಇದಕ್ಕೆ ಈ ಕೆಳಕಂಡ ಅಧಿಕಾರಿ/ನೌಕರರು ಜವಾಬ್ದಾರರಾಗಿರುತ್ತಾರೆಂದು ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ನೀಡಿದ್ದ ದೂರಿನ ಮೇರೆಗೆ ಕರ್ನಾಟಕ ಲೋಕಾಯುಕ್ತ ಕಚೇರಿಯು ತನಿಖೆ ನಡೆಸಿ ಲೋಕಾಯುಕ್ತ ಕಾಯ್ದೆ ಕಲಂ 12(3)ರ ಅನುಸಾರ ಸಲ್ಲಿಸಿದ್ದ ವರದಿಯನ್ನು ಸರ್ಕಾರವು ಪರಿಶೀಲಿಸಿ, ಆಪಾದಿತ ಅಧಿಕಾರಿ/ನೌಕರರುಗಳ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ನಿಜವೆಂದು ಕಂಡು ಬಂದ ಹಿನ್ನೆಲೆಯಲ್ಲಿ, ಅವರುಗಳ ವಿರುದ್ಧದ ಆರೋಪಗಳ ಬಗ್ಗೆ ವಿವರವಾದ ಇಲಾಖಾ ವಿಚಾರಣೆಯನ್ನು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 11ರಂತೆ ನಡೆಸಲು ಸದರಿ ನಿಯಮಗಳ ನಿಯಮ 14(ಎ) ರನ್ವಯ ಪ್ರಕರಣವನ್ನು ಮೇಲೆ ಕ್ರಮ ಸಂಖ್ಯೆ:(1)ರಲ್ಲಿ ಓದಲಾದ ದಿನಾಂಕ:17.09.2014 ರ ಸರ್ಕಾರದ ಆದೇಶದಲ್ಲಿ ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಲಾಗಿತ್ತು:-

1. ಶ್ರೀ ಎಂ.ಎನ್.ಪಾಟೀಲ್, ಅಂದಿನ ಸ.ಕಾ.ಇಂ, ಪಂ.ರಾ.ಇಂ ಉಪವಿಭಾಗ, ಗಂಗಾವತಿ,
2. ಶ್ರೀ ದುರ್ಗಣ್ಣ, ಸಹಾಯಕ ಇಂಜಿನಿಯರ್,ಪಂ.ರಾ.ಇಂ.,ಉಪವಿಭಾಗ, ಗಂಗಾವತಿ ಮತ್ತು
3. ಶ್ರೀ ಡಿ.ಎಂ.ರವಿಕುಮಾರ್,ಕಿರಿಯ ಇಂಜಿನಿಯರ್ ಪಂ.ರಾ.ಇಂ.,ಉಪವಿಭಾಗ, ಗಂಗಾವತಿ

ಸದರಿ ಆದೇಶದ ಅನುಸಾರ ಮಾನ್ಯ ಉಪಲೋಕಾಯುಕ್ತ ರವರು ಅಪರ ನಿಬಂಧಕರು ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಿದ್ದು, ವಿಚಾರಣಾಧಿಕಾರಿಯವರು ಮೇಲ್ಕಂಡ ಆಪಾದಿತರ ವಿರುದ್ಧದ ಆರೋಪಕ್ಕೆ ಸಂಬಂಧಿಸಿದಂತೆ ಹಲವಾರು ದಾಖಲೆಗಳು ಮತ್ತು ಸಾಕ್ಷಿಗಳು ಹಾಗೂ ಆಪಾದಿತರು ಸಲ್ಲಿಸಿದ ದಾಖಲೆಗಳನ್ನು ಪರಿಶೀಲಿಸಿ ವಿವರವಾಗಿ ವಿಚಾರಣೆ ನಡೆಸಿದ್ದು, ಶಿಸ್ತು ಪ್ರಾಧಿಕಾರವು ಪ್ರಕರಣಕ್ಕೆ ಸಂಬಂಧಪಟ್ಟಂತೆ ದಾಖಲೆ/ಮಾಹಿತಿ ಹಾಗೂ ಸಾಕ್ಷಿ ಒದಗಿಸುವಲ್ಲಿ ವಿಫಲವಾಗಿರುವುದರಿಂದ ಸದರಿ ಆಪಾದಿತರ ವಿರುದ್ಧ ಮಾಡಿರುವ ಆರೋಪಗಳನ್ನು ಸಾಬೀತುಪಡಿಸಲು ಸಾಧ್ಯವಾಗಿರುವುದಿಲ್ಲವೆಂದು ಅಭಿಪ್ರಾಯಪಟ್ಟು ವರದಿಯನ್ನು ಮಾನ್ಯ ಉಪಲೋಕಾಯುಕ್ತರವರಿಗೆ ದಿನಾಂಕ:25.11.2021 ರಂದು ಸಲ್ಲಿಸಿದ್ದು. ಮಾನ್ಯ ಉಪ ಲೋಕಾಯುಕ್ತರವರು ವಿಚಾರಣಾ ವರದಿಗೆ ಸಹಮತಿಸಿ, ಸದರಿ ಆಪಾದಿತರ ವಿರುದ್ಧ ಮಾಡಲಾದ ಆರೋಪಗಳಿಂದ ದೋಷಮುಕ್ತಗೊಳಿಸುವಂತೆ ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ: 29.11.2021 ರ ವರದಿಯಲ್ಲಿ ಸರ್ಕಾರಕ್ಕೆ ಶಿಫಾರಸ್ಸು ಮಾಡಿರುತ್ತಾರೆ.

ಸರ್ಕಾರವು ವಿಚಾರಣಾ ವರದಿ, ಮಾನ್ಯ ಉಪಲೋಕಾಯುಕ್ತರವರ ಶಿಫಾರಸ್ಸು ಹಾಗೂ ಇತರೆ ದಾಖಲೆಗಳನ್ನು ಪರಿಶೀಲಿಸಿದೆ. 2011ನೇ ಸಾಲಿನಲ್ಲಿ ಸುವರ್ಣ ಗ್ರಾಮ ಯೋಜನೆಯಡಿ ಹುಲ್ಕಿಹಾಳ ಗ್ರಾಮದ ಸರ್ವೆ ನಂ.1 ರಲ್ಲಿ 3 ಎಕರೆ 1 ಗುಂಟೆ ಜಮೀನಿನಲ್ಲಿ ಅಂಗನವಾಡಿ ಕೇಂದ್ರ ಹಾಗು ಸಮುದಾಯ ಭವನ ನಿರ್ಮಾಣ ಕಾಮಗಾರಿಗಳನ್ನು ಕೈಗೊಂಡಿದ್ದು, ವಾರಸುದಾರರಾದ ಶ್ರೀ ರುದ್ರಪ್ಪ.ಜೆ, ರವರ ಒಪ್ಪಿಗೆಯನ್ನು ಪಡೆದು ಸದರಿ ಕಾಮಗಾರಿಯನ್ನು ಕೈಗೊಳ್ಳಲಾಗಿರುತ್ತದೆ, ಅಲ್ಲದೆ, ವಾರಸುದಾರರು ತಾವೇ ಸ್ವತ: ಈ ಜಾಗ/ವಿಸ್ತೀರ್ಣದ ಜಮೀನನ್ನು ದಾನ ನೀಡಿರುವುದಾಗಿ, ಇದಕ್ಕೆ ದೂರುದಾರರು ಸೇರಿದಂತೆ ಸಂಬಂಧಪಟ್ಟ ಗ್ರಾಮಗಳ ಗ್ರಾಮಸ್ಥರು ಹಾಗೂ ಸರ್ಕಾರದಿಂದ ಯಾವುದೇ ರೀತಿಯ ಆಕ್ಷೇಪಣೆ ವ್ಯಕ್ತವಾಗಿರುವುದಿಲ್ಲವೆಂದು ವರದಿ ಮಾಡಿರುತ್ತಾರೆ. ಅಲ್ಲದೆ, ದೂರುದಾರರು ತಾವು ಲೋಕಾಯುಕ್ತ ಸಂಸ್ಥೆಯಲ್ಲಿ ದಾಖಲಿಸಿದ್ದ ದೂರನ್ನು ವಾಪಸ್ಸು ಪಡೆಯುವುದಾಗಿ ತಿಳಿಸಿದ್ದು, ಅವರೇ ಸ್ವಯಂ ಅಂಗನವಾಡಿ ಕೇಂದ್ರ ಮತ್ತು ಸಮುದಾಯಭವನ ಕಟ್ಟಲು ಸ್ಥಳವನ್ನು ಬಿಟ್ಟುಕೊಟ್ಟಿರುವುದರಿಂದ ಸರ್ಕಾರಕ್ಕೆ ಯಾವುದೇ ರೀತಿಯ ಆರ್ಥಿಕ ನಷ್ಟ ಉಂಟಾಗಿರುವುದಿಲ್ಲವೆಂದು ವರದಿ ಮಾಡಿರುತ್ತಾರೆ.

ಕಟ್ಟಡ ಕಾಮಗಾರಿಯನ್ನು ಮೇಲಾಧಿಕಾರಿಗಳ ಮತ್ತು ಸರ್ಕಾರದ ಅನುಮತಿಯ ಮೇರೆಗೆ ಕೈಗೊಂಡಿದ್ದು, ಇದರಿಂದ ಸರ್ಕಾರಕ್ಕೆ ಯಾವುದೇ ಆರ್ಥಿಕ ನಷ್ಟ ಉಂಟು ಮಾಡಿರುವುದು ಕಂಡುಬರುವುದಿಲ್ಲ. ಸದರಿ ಕಾಮಗಾರಿಯಿಂದ ಅಲ್ಲಿನ ಗ್ರಾಮಸ್ಥರಿಗೆ ಮತ್ತು ಸಾರ್ವಜನಿಕರಿಗೆ ಹೆಚ್ಚಿನ ಅನುಕೂಲವಾಗಿರುತ್ತದೆ. ಆಪಾದಿತರ ವಿರುದ್ಧ ಮಾಡಲಾದ ಆರೋಪವನ್ನು ಸಾಬೀತುಪಡಿಸಲು ಶಿಸ್ತು ಪ್ರಾಧಿಕಾರವು ದಾಖಲೆ/ಮಾಹಿತಿ ಹಾಗೂ ಸಾಕ್ಷಿ ಒದಗಿಸುವಲ್ಲಿ ವಿಫಲವಾಗಿರುತ್ತದೆಂದು ತಿಳಿಸಲಾಗಿರುತ್ತದೆ. ಈ ಅಂಶಗಳ ಹಿನ್ನೆಲೆಯಲ್ಲಿ ಸದರಿ ಆಪಾದಿತರುಗಳ ವಿರುದ್ಧ ಮಾಡಲಾದ ಆರೋಪವು ಇಲಾಖಾ ವಿಚಾರಣೆಯಲ್ಲಿ ಸಾಬೀತಾಗಿಲ್ಲದಿರುವುದು ಸ್ಪಷ್ಟವಾಗುತ್ತದೆ. ಅಲ್ಲದೆ ವಿಚಾರಣಾ ವರದಿಯಲ್ಲಿ ಆಕ್ಷೇಪಿಸಬಹುದಾದ ಯಾವುದೇ ಅಂಶಗಳು ಕಂಡುಬರುವುದಿಲ್ಲ. ಹಾಗಾಗಿ ವಿಚಾರಣಾ ವರದಿಯನ್ನು ಅಂಗೀಕರಿಸಿ ಸದರಿ ಆಪಾದಿತ ಅಧಿಕಾರಿ/ನೌಕರರ ವಿರುದ್ಧ ಮಾಡಲಾದ ಆರೋಪಗಳಿಂದ ದೋಷಮುಕ್ತಗೊಳಿಸಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 04 ಇಎನ್‌ಕ್ಯೂ 2022,</u>**
**<u>ಬೆಂಗಳೂರು, ದಿನಾಂಕ: 22.02.2022</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಈ ಕೆಳಕಂಡ ಆಪಾದಿತ ಅಧಿಕಾರಿ/ನೌಕರರುಗಳ ವಿರುದ್ಧ ಮಾಡಲಾದ ಆರೋಪವು ವಿಚಾರಣೆಯಲ್ಲಿ ಸಾಬೀತಾಗಿಲ್ಲವಾದ್ದರಿಂದ ಸದರಿಯವರನ್ನು ದೋಷಮುಕ್ತಗೊಳಿಸಿ ಆದೇಶಿಸಿದೆ:-

1. ಶ್ರೀ ಎಂ.ಎನ್.ಪಾಟೀಲ್, ಅಂದಿನ ಸ.ಕಾ.ಇಂ, ಪಂ.ರಾ.ಇಂ ಉಪವಿಭಾಗ, ಗಂಗಾವತಿ,
2. ಶ್ರೀ ದುರ್ಗಣ್ಣ, ಸಹಾಯಕ ಇಂಜಿನಿಯರ್,ಪಂ.ರಾ.ಇಂ.,ಉಪವಿಭಾಗ, ಗಂಗಾವತಿ ಮತ್ತು
3. ಶ್ರೀ ಡಿ.ಎಂ.ರವಿಕುಮಾರ್,ಕಿರಿಯ ಇಂಜಿನಿಯರ್ ಪಂ.ರಾ.ಇಂ.,ಉಪವಿಭಾಗ, ಗಂಗಾವತಿ

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

22/2

(ಕೆ.ನದೀಮ್ ಅಹ್ಮದ್.)
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಲೆಕ್ಕ ಪತ್ರ 1&2)/(ಆಡಿಟ್) ಕರ್ನಾಟಕ, ಕರ್ನಾಟಕ, ಬೆಂಗಳೂರು.
2. ನಿಬಂಧಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.

..3

3. ಸರ್ಕಾರದ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ. ವಿಕಾಸಸೌಧ, ಬೆಂಗಳೂರು.
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಬೆಂಗಳೂರು.
6.ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ
7.ಅಪರ ನಿಬಂಧಕರು ವಿಚಾರಣೆಗಳು-7, ಕರ್ನಾಟಕ ಲೋಕಾಯುಕ್ತ ಕಚೇರಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
8. ಸಂಬಂಧಪಟ್ಟ ಅಧಿಕಾರಿ/ನೌಕರರಿಗೆ - ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಕೊಪ್ಪಳ ಇವರ ಮುಖಾಂತರ
9. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
10. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ (ಸೇವೆಗಳು– ಎ & ಸಿ).
11. ಗ್ರಾ.ಅ.ಪಂ.ರಾಜ್ ಇಲಾಖೆಯ ಪ್ರಧಾನ ಕಾರ್ಯದರ್ಶಿ /ಜಂಟಿ ಕಾರ್ಯದರ್ಶಿ (ಆಡಳಿತ-1) ಇವರ ಆಪ್ತ ಕಾರ್ಯದರ್ಶಿ/ಆಪ್ತ ಸಹಾಯಕರು.
12. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
13. ಹೆಚ್ಚುವರಿ ಪ್ರತಿ : ರಕ್ಷಾ ಕಡತ